# Akashvani : Bangalore
# Regional Bulletin In Kannada
# 02.10.2025 / 6.40 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.10.2025 / 6.40 pm**

**<><*<><>*><>**

ಮುಖ್ಯಾಂಶಗಳು

೧. ನಾಡಹಬ್ಬ ದಸರಾ ಜಂಬೂಸವಾರಿಗೆ ಮುಖ್ಯಮಂತ್ರಿ ಚಾಲನೆ; ೬ನೇ ಬಾರಿ ಚಿನ್ನದ ಅಂಬಾರಿ ಹೊತ್ತ ಕ್ಯಾಪ್ಟನ್ ಅಭಿಮನ್ಯು

೨. ಅಧಿಕಾರ ಹಂಚಿಕೆ ಬಗ್ಗೆ ಯಾರೇ ಮಾತನಾಡಿದರೂ ಪಕ್ಷ ವಿರೋಧಿ ಕೆಲಸ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ಧಾರವಾಡದ ಶಾಲ್ಮಲಾ ನದಿ ಉಗಮ ಸ್ಥಾನದ ಬಳಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ವಚ್ಛತಾ ಅಭಿಯಾನ

೪. ದಕ್ಷಿಣ ಕನ್ನಡ ಜಿಲ್ಲಾಡಳಿತದಿಂದ ಹೊಸ ಮಾರ್ಗಸೂಚಿಯಂತೆ ಕೆಂಪು ಕಲ್ಲು ತೆಗೆಯಲು ಅವಕಾಶ

*****************

ವಿಶ್ವವಿಖ್ಯಾತ, ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಹಿನ್ನಲೆಯಲ್ಲಿ ಅರಮನೆ ಆವರಣದಲ್ಲಿ ಜಂಬೂಸವಾರಿಗೆ ಪುಷ್ಪಾರ್ಚನೆ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದಾರೆ. ೬ ನೇ ಬಾರಿ ಚಿನ್ನದ ಅಂಬಾರಿ ಹೊತ್ತು ಕ್ಯಾಪ್ಟನ್ ಅಭಿಮನ್ಯು ಸಾಗಿದ್ದು, ಮಾವುತ ವಸಂತ ಆನೆಯನ್ನ ಮುನ್ನಡೆಸಿದ್ದಾರೆ. ಅಭಿಮನ್ಯುವಿನೊಂದಿಗೆ ಕುಮ್ಕಿ ಆನೆಗಳಾದ ಕಾವೇರಿ, ರೂಪಾ ಹೆಜ್ಜೆ ಹಾಕಿವೆ. ಜಂಬೂ ಸವಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹೈಕೋರ್ಟ್ ಮುಖ್ಯ ನ್ಯಾಯಾಮೂರ್ತಿ ವಿಭು ಬಕ್ರು, ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್. ಸಿ. ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಸೇರಿದಂತೆ ಇತರರು ಉಪಸ್ಥಿತರಿದ್ದರು. ಆರನೇ ಬಾರಿಗೆ ಕ್ಯಾಪ್ಟನ್ ಅಭಿಮನ್ಯು ೭೫೦ ಕೆ.ಜಿ.

ತೂಕದ ಅಂಬಾರಿ ಹೊತ್ತು ಬನ್ನಿ ಮಂಟಪದವರೆಗೆ  ಹೆಜ್ಜೆ ಹಾಕುತ್ತಿದ್ದಾನೆ.  ಈ ಬಾರಿ ಮೆರವಣಿಗೆಯಲ್ಲಿ ೫೮ ಸ್ತಬ್ಧ ಚಿತ್ರಗಳು ೧೨೫ಕ್ಕೂ ಹೆಚ್ಚು ಕಲಾತಂಡಗಳು ೧೪ ಆನೆಗಳು ಅಶ್ವಾರೋಹಿ ಪಡೆಗಳು ಭಾಗವಹಿಸಿವೆ. ದಸರಾ ಜಂಬೂಸವಾರಿ ವೀಕ್ಷಿಸಲು ಅರಮನೆ ಅಂಗಳದಲ್ಲಿ ೪೮ ಸಾವಿರ ಆಸನಗಳ ವ್ಯವಸ್ಥೆ ಮಾಡಲಾಗಿತ್ತು. ಅರಮನೆಯ ಉತ್ತರ ದ್ವಾರದ ಮೂಲಕ ತೆರಳಿರುವ ಜಂಬೂಸವಾರಿ ಮೆರವಣಿಗೆ ಕೆ.ಆರ್ ಸರ್ಕಲ್, ಸಯ್ಯಾಜಿರಾವ್ ರಸ್ತೆ, ಸರ್ಕಾರಿ ಆಯುರ್ವೇದ ಸರ್ಕಲ್, ಬಂಬೂ ಬಜಾರ್, ಹೈವೇ ಸರ್ಕಲ್ ಮೂಲಕ ಸಾಗಿ ಸಂಜೆ ವೇಳೆಗೆ ಬನ್ನಿಮಂಟಪ ಪಂಜಿನ ಕವಾಯತು ಮೈದಾನ ತಲುಪಲಿದೆ. ಜಂಬೂಸವಾರಿ ಮುಗಿದ ಬಳಿಕ ೭ ಗಂಟೆಗೆ ಬನ್ನಿ ಮಂಟಪ ಮೈದಾನದಲ್ಲಿ ಪಂಜಿನ ಕವಾಯತು ನಡೆಯಲಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕವಾಯತು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಲಿದ್ದಾರೆ.

****************

"ಅಧಿಕಾರ ಹಂಚಿಕೆ ವಿಚಾರದಲ್ಲಿ ಯಾರೇ ಮಾತನಾಡಿದರೂ ಅದು ಪಕ್ಷ ವಿರೋಧಿ ಕೆಲಸ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ ಮಾತನಾಡುವುದು ಪಕ್ಷಕ್ಕೆ ಹಾನಿ ಮಾಡಿದಂತೆ" ಎಂದು ಹೇಳಿದ್ದಾರೆ. ಶಾಸಕ ರಂಗನಾಥ್ ಸೇರಿದಂತೆ ಈ ವಿಚಾರವಾಗಿ ಯಾರೆಲ್ಲಾ ಮಾತನಾಡಿದ್ದಾರೋ ಅವರಿಗೆ ನೋಟೀಸ್ ನೀಡುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಪಕ್ಷಕ್ಕಾಗಿ ದುಡಿದವರನ್ನು ನಿಗಮ ಮಂಡಳಿಗೆ ನೇಮಕ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ಧಾರವಾಡದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಶಾಲ್ಮಲಾ ನದಿ ಉಗಮ ಸ್ಥಾನದ ಬಳಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ  ಪೊರಕೆ ಹಿಡಿದು ಸ್ವತಃ ಕಸ ಗುಡಿಸುವುದರ ಮೂಲಕ ಸ್ವಚ್ಛತಾ ಅಭಿಯಾನಕ್ಕೆ ಕೈ ಜೋಡಿಸಿದರು. ನದಿ ಬಳಿಯ ಮೆಟ್ಟಿಲುಗಳ ಮೇಲಿದ್ದ ಕಸ ಗುಡಿಸಿ ಸ್ವತಃ  ಜೋಶಿ ಅವರೇ ಕಸವನ್ನು ತುಂಬುವುದರ ಮೂಲಕ ಸ್ವಚ್ಛ ಭಾರತ ಆಂದೋಲನಕ್ಕೆ ಸಾಥ್ ನೀಡಿದರು.  ಬಳಿಕ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇದೇ ೨೭ಕ್ಕೆ ಕೇಂದ್ರ ಸರ್ಕಾರದಿಂದ ಗಣತಿ ಆರಂಭ ಆಗಲಿದೆ ಎಂದು ತಿಳಿಸಿದ್ದಾರೆ.

****************

ಹುಬ್ಬಳ್ಳಿ ರೈಲ್ವೆ ವಿಭಾಗದ ವತಿಯಿಂದ ಇಂದು ಹುಬ್ಬಳ್ಳಿ ರೈಲು ನಿಲ್ದಾಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಮಂತ್ರಿ ಲಾಲ್ ಬಹಾದ್ದುರ್ ಶಾಸ್ತ್ರೀ ಅವರ ಜಯಂತ್ಯೋತ್ಸವ ಮತ್ತು ಸ್ವಚ್ಛತಾ ಹಿ ಸೇವಾ ೨೦೨೫ ಅಭಿಯಾನದ ಸಮಾರೋಪ ಸಮಾರಂಭ ನಡೆಯಿತು. ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಬೇಲಾ ಮೀನಾ ಮಾತನಾಡಿ, ತ್ಯಾಜ್ಯರಹಿತ ಭಾರತ ನಿರ್ಮಿಸಲು ನಾಗರಿಕರಲ್ಲಿ ಪರಿಸರ ಸ್ನೇಹ ಬೆಳೆಸುವುದು ಸ್ವಚ್ಛತಾ ಹಿ ಸೇವಾ ೨೦೨೫ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಸ್ವಚ್ಛೋತ್ಸವ ೨೦೨೫ ಅಂತ್ಯವಲ್ಲ, ಬದಲಿಗೆ ಸ್ವಚ್ಛ ಮತ್ತು ಹಸಿರು ಭಾರತ ನಿರ್ಮಾಣಕ್ಕೆ ಆರಂಭವಾಗಿದೆ ಎಂದು ಹೇಳಿದರು. ಕೋಲಾರ ಜಿಲ್ಲೆಯಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ಜಿಲ್ಲಾಡಳಿತ ನಗರಸಭೆಯೊಂದಿಗೆ 'ಕೋಲಾರಮ್ಮ ಸ್ವಚ್ಛತಾ ಕಾರ್ಯಪಡೆ' ಎಂಬ ವಿಶೇಷ ತಂಡವನ್ನು ರಚಿಸಿದೆ. ರಾಜ್ಯದಲ್ಲೇ ಇಂತಹ ಯೋಜನೆ ಮೊದಲ ಬಾರಿಗೆ ಕೋಲಾರದಲ್ಲಿ ಜಾರಿಯಾಗುತ್ತಿದ್ದು, ಸಾರ್ವಜನಿಕರ ಸಹಭಾಗಿತ್ವ ಪ್ರಮುಖವಾಗಿದೆ. ಕೋಲಾರ ಜಿಲ್ಲೆಯನ್ನು ಮಾದರಿಯನ್ನಾಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಸ್ವಚ್ಛತೆ ಎಂಬುದು ಒಂದು ದಿನಕ್ಕೆ ಮಾತ್ರ ಸೀಮಿತವಾಗದೇ ಎಲ್ಲರು ಸೇರಿ ಶ್ರಮದಾನ ಮಾಡುವ ಮೂಲಕ ಗಾಂಧೀಜಿ ಅವರ ತತ್ವ ಸಿದ್ಧಾಂತವನ್ನು ಪಾಲನೆ ಮಾಡೋಣ ಎಂದು ಹಾಸನ ಸಂಸದ ಶ್ರೇಯಸ್ ಎಂ. ಪಟೇಲ್ ಕರೆ ನೀಡಿದ್ದಾರೆ. ಜಿಲ್ಲಾಧಿಕಾರಿ ಲತಾಕುಮಾರಿ ಮಾತನಾಡಿ, ಮಹಾನಗರ ಪಾಲಿಕೆ ಜೊತೆಗೂಡಿ ಜಿಲ್ಲೆಯಾದ್ಯಂತ ಸ್ವಚ್ಛತಾ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಸ್ವಚ್ಚತಾ ಹೀ ಸೇವಾ ಅಭಿಯಾನದಡಿಯಲ್ಲಿ ಗದಗ ಬೆಟಗೇರಿ ನಗರಸಭೆಯ ಸ್ವಚ್ಚತಾ ಕೆಲಸಗಾರರಿಗೆ ಸುರಕ್ಷಾ ಕಿಟ್‌ಗಳನ್ನು ಹಾಗೂ ಆಯುಷ್ಮಾನ್ ಭಾರತ್ ಕಾರ್ಡಗಳನ್ನು ಗದಗ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ವಿತರಿಸಿದರು.

****************

ದಸರಾ ಮುಗಿದ ಬಳಿಕ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ಮಾರ್ಗಸೂಚಿಯಂತೆ ಕೆಂಪುಕಲ್ಲು ತೆಗೆಯಲು ಅವಕಾಶ ನೀಡಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಂಪುಕಲ್ಲಿಗೆ ಸಂಬಂಧಿಸಿದಂತೆ ಈಗಾಗಲೇ ಮಾರ್ಗಸೂಚಿ ಹೊರಡಿಸಲಾಗಿದೆ. ಜಿಲ್ಲಾಧಿಕಾರಿ ಈ ಬಗ್ಗೆ ಅಂತಿಮ ನಿರ್ದೇಶನಗಳನ್ನು ನೀಡಲಿದ್ದಾರೆ. ಬಳಿಕ ಕೆಂಪುಕಲ್ಲು ಜನರಿಗೆ ಸಿಗಲಿದೆ. ನಾನ್ ಸಿಆರ್‌ಝಡ್ ಮರಳು ಪಡೆಯಲು ಟೆಂಡರ್ ಮೂಲಕ ತೆಗೆಯಲು ಅವಕಾಶ ಮಾಡಿಕೊಡಲಾಗಿದೆ. ಸಿಆರ್‌ಝಡ್ ಮರಳು ವಿಚಾರ ಕೇಂದ್ರದ ನಿರ್ಧಾರದ ಮೇಲೆ ಅವಲಂಬಿತವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ರಾಜ್ಯದ ವಿವಿಧೆಡೆ ಗಾಂಧಿಜಯಂತಿ ಹಾಗೂ ಮಾಜಿ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯನ್ನು ಆಚರಿಸಲಾಯಿತು. ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಕೋಲಾರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಎಲ್ಲಾ ಧರ್ಮ ಗುರುಗಳಿಂದ ಧರ್ಮ ಗ್ರಂಥಗಳ ಸಂದೇಶ ಮತ್ತು ಶಾಲಾ ಮಕ್ಕಳಿಂದ ಭಜನೆ ಕಾರ್ಯಕ್ರಮ ಜರುಗಿದವು. ಮಹಾತ್ಮ ಗಾಂಧೀಜಿ ನುಡಿದಂತೆ ನಡೆದು, ವಿಶ್ವಮಾನ್ಯರಾದರು ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ಗಾಂಧಿ ಮಂದಿರಲ್ಲಿಂದು ಹಮ್ಮಿಕೊಂಡಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯನ್ನು ಚರಕದಿಂದ ನೂಲುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ೧೫೬ನೇ ಜಯಂತಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ಗಾಂಧಿ ಜಯಂತಿಯ ಅಂಗವಾಗಿ ಗಾಂಧೀಜಿ ಪುತ್ಥಳಿಗೆ ವಿವಿಧ ಗಣ್ಯರು ಮಾಲಾರ್ಪಣೆ ಮಾಡಿದರು, ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಚಿಂತನೆ, ದೂರದೃಷ್ಟಿ ಮತ್ತು ತತ್ವಾದರ್ಶಗಳು ಇಂದಿನ ವಿದ್ಯಾರ್ಥಿ, ಯುವಪೀಳಿಗೆಗೆ ಪ್ರೇರಣಾದಾಯಕವಾಗಿವೆ ಎಂದು ಚಿಕ್ಕಬಳ್ಳಾಪುರ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಕಾರವಾರ ನಗರಸಭೆಯ ಮಹಾತ್ಮ ಗಾಂಧೀ ಉದ್ಯಾನವನದಲ್ಲಿ ಮಹಾತ್ಮ ಗಾಂಧಿ ಜಯಂತಿ ಹಾಗೂ ಮಾಜಿ ಪ್ರಧಾನ ಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಿಸಲಾಯಿತು. ರಾಜಭವನದಲ್ಲಿಂದು ರಾಜ್ಯಪಾಲ

ಥಾವರ್ ಚಂದ್ ಗೆಹ್ಲೋಟ್, ಗಾಂಧೀಜಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಭಾವಪೂರ್ಣ ನಮನ ಸಲ್ಲಿಸಿದರು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿಯನ್ನು ವಿಜಯಪುರದ ನಗರದ ಗಾಂಧಿ ಭವನದಲ್ಲಿ ಆಯೋಜಿಸಲಾಗಿತ್ತು. ಬಾಪೂ ಚರಕ ತಿರುಗಿಸುವುದರ ಮೂಲಕ ಜಿಲ್ಲಾಧಿಕಾರಿ ಡಾಕ್ಟರ್ ಆನಂದ ಕೆ. ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿಜಯನಗರದ ಹಂಪಿ ಕನ್ನಡ ವಿಶ್ವವಿದ್ಯಾಲಯದದಲ್ಲಿ ಹಮ್ಮಿಕೊಂಡಿದ್ದ ಮಹಾತ್ಮಾಗಾಂಧಿ ಜಯಂತಿ ದಿನಾಚರಣೆಯಲ್ಲಿ ಗಾಂಧೀಜಿ ಮತ್ತು ಸ್ವತಂತ್ರ ಭಾರತದ ಪರಿಕಲ್ಪನೆ ಎಂಬ ವಿಷಯ ಕುರಿತು ಹಸ್ತ ಪ್ರತಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ವೀರೇಶ ಬಡಿಗೇರ ಉಪನ್ಯಾಸ ನೀಡಿದರು.

****************

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಇಂದು ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಜಯಮ್ಮ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ ಅಲಿಮ್ ಪಾಷಾ ಬಿ ಆರ್, ವೈದ್ಯರಾದ ವಿಕ್ರಂ, ಸಮುದಾಯ ಆರೋಗ್ಯ ಅಧಿಕಾರಿ ಸೋನಾ, ಕಚೇರಿ ಅಧೀಕ್ಷಕರಾದ ಮಹೇಶ್ವರ ನಾಯಕ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರಾಘವೇಂದ್ರ, ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

****************

ನಾಡಿನ ಅನ್ನದಾತರಿಗೆ ಇನ್ನಷ್ಟು ಶಕ್ತಿ ತುಂಬಲು ಐತಿಹಾಸಿಕ ನಿರ್ಧಾರ ಕೈಗೊಂಡಿರುವ ಪ್ರಧಾನಿ ನರೇಂದ್ರ ಮೋದಿ, ನೇತೃತ್ವದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ, ೨೦೨೬-೨೭ ರ ಮಾರುಕಟ್ಟೆ ಹಂಗಾಮಿನ ಎಲ್ಲಾ ಹಿಂಗಾರು ಬೆಳೆಗಳ ಕನಿಷ್ಠ ಬೆಂಬಲ ಬೆಲೆಯನ್ನು ಗಣನೀಯವಾಗಿ ಹೆಚ್ಚಿಸಲು ಅನುಮೋದನೆ ನೀಡಿದೆ. ಸಾಮಾಜಿಕ ಜಾಲ ತಾಣದಲ್ಲಿ ಈ ವಿಷಯ ತಿಳಿಸಿರುವ ಪ್ರತಿಪಕ್ಷ ನಾಯಕ ಆರ್ ಅಶೋಕ ಸರ್ಕಾರದ ಈ ನಿರ್ಧಾರದಿಂದ ರೈತರಿಗೆ ಉತ್ಪಾದನಾ

ವೆಚ್ಚಕ್ಕಿಂತ ಗಣನೀಯವಾಗಿ ಹೆಚ್ಚಿನ ಲಾಭ ಸಿಗುವುದು ಖಾತ್ರಿಯಾಗಲಿದೆ. ಗೋಧಿಗೆ ಶೇಕಡಾ ೧೦೯ ಸಾಸಿವೆಗೆ ಶೇಕಡಾ ೯೩ , ಕಡಲೆಗೆ ಶೇಕಡಾ ೫೯ ಬಾರ್ಲಿಗೆ ಶೇಕಡಾ ೫೮ ಮತ್ತು ಕುಸುಬೆಗೆ ಶೇಕಡಾ ೫೦ರಷ್ಟು ಲಾಭಾಂಶ ಲಭ್ಯವಾಗಲಿದೆ ಎಂದು ತಿಳಿಸಿದ್ದಾರೆ.

****************

ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರನ್ನು ಜನ ವಿಶ್ವಾಸ ಮಸೂದೆ, ೨೦೨೫ ರ ಆಯ್ಕೆ ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಸಮಿತಿಯು ಲೋಕಸಭೆಯ ೨೪ ಸದಸ್ಯರನ್ನು ಒಳಗೊಂಡಿದೆ. ಎಕ್ಸ್ ನಲ್ಲಿ ಈ ವಿಷಯ ತಿಳಿಸಿರುವ ಸಂಸದ ತೇಜಸ್ವಿ ಸೂರ್ಯ "ಈ ಜವಾಬ್ದಾರಿಯನ್ನು ವಹಿಸಿದ್ದಕ್ಕಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಸಭಾಧ್ಯಕ್ಷ ಓಂ ಬಿರ್ಲಾ ಸಚಿವರಾದ ಕಿರಣ್ ರಿಜಿಜು ಹಾಗೂ ಪಿಯೂಷ್ ಗೋಯಲ್ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ. ಜನರ ಜೀವನವನ್ನು ಸುಲಭಗೊಳಿಸುವ, ವಿಶ್ವಾಸವನ್ನು ಬಲಪಡಿಸುವ ಮತ್ತು ಹೊಸ ಉದ್ಯಮಶೀಲ ಪ್ರಯತ್ನಗಳಿಗೆ ಉತ್ತೇಜನ ನೀಡುವ ಮಸೂದೆಯನ್ನು ರೂಪಿಸಲು ಖಾತರದಿಂದ ಕಾಯುತ್ತಿದ್ದೇನೆ ಎಂದು ತಿಳಿಸಿದ್ದಾರೆ.

****************